ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY, RESEARCH AND REFERENCE BRANCH**

ಪತ್ರಿಕಾ ತುಣುಕುಗಳು

**PAPER CLIPPINGS**

ಇಲಾಖೆ / ವಿಷಯ : DEPARTMENT / SUBJECT: ಕೃಷಿ ಕಾಯ್ದೆ

ಪತ್ರಿಕೆಯ ಹೆಸರು : NAME OF THE NEWS PAPER: ಕನ್ನಡಪ್ರಭ ದಿನಾಂಕ : DATE : 26/1/21

## ರಾಜ್ಯ, ರಾಷ್ಟ್ರ ರಾಜಧಾನಿಗೆ ಟ್ರ್ಯಾಕ್ಟರ್‌ಗಳಲ್ಲಿ ಲಗ್ಗೆ

# ಇಂದು ರೈತ ಕ್ರಾಂತಿ!

### ಕೃಷಿ ಕಾಯ್ದೆ ರದ್ದತಿಗೆ ಆಗ್ರಹಿಸಿ ದಿಲ್ಲಿ, ಬೆಂಗಳೂರಲ್ಲಿ ಟ್ರ್ಯಾಕ್ಟರ್ ಪರೇಡ್

### ಬೆಂಗಳೂರಿಗೆ 20000ಕ್ಕೂ ಹೆಚ್ಚು ರೈತರು ದಾಂಗುಡಿಯಿಡುವ ಸಾಧ್ಯತೆ

### ರೈತರು, ವಾಹನಗಳನ್ನು ತಡೆಯಲು ಜಿಲ್ಲಾ ಎಸ್‌ಪಿಗಳಿಗೆ ಡಿಜಿಪಿ ಆದೇಶ

### ಪರೇಡ್‌ಗೆ ಅಡ್ಡಿ ಮಾಡಿದರೆ ಹೆದ್ದಾರಿ ಬಂದ್: ಸರ್ಕಾರಕ್ಕೆ ರೈತರ ಎಚ್ಚರಿಕೆ


• **ಕನ್ನಡಪ್ರಭ ವಾರ್ತೆ** ಬೆಂಗಳೂರು

ಕೇಂದ್ರ ಮತ್ತು ರಾಜ್ಯ ಸರ್ಕಾರಗಳು ಜಾರಿಗೊಳಿಸಿರುವ ಕೃಷಿ ಕಾಯ್ದೆಗಳನ್ನು ಹಿಂಪಡೆಯುವಂತೆ ಒತ್ತಾಯಿಸಿ ರೈತ ಸಂಘಟನೆಗಳು ಸೇರಿದಂತೆ ವಿವಿಧ ಸಂಘ-ಸಂಸ್ಥೆಗಳು ಮಂಗಳವಾರ ರಾಜಧಾನಿ ಬೆಂಗಳೂರಿನಲ್ಲಿ ಟ್ರ್ಯಾಕ್ಟರ್ ಪರೇಡ್ ನಡೆಸಲು ನಿರ್ಧರಿಸಿದ್ದು, ರಾಜ್ಯದ ವಿವಿಧ ಭಾಗಗಳಿಂದ ಸಾವಿರಾರು ಟ್ರ್ಯಾಕ್ಟರ್ ಹಾಗೂ ವಾಹನಗಳಲ್ಲಿ ರೈತರು ರ್‍ಯಾಲಿಯಲ್ಲಿ ಭಾಗವಹಿಸಲು ಮುಂದಾಗಿದ್ದಾರೆ.

ಈ ಮಧ್ಯೆ ರ್‍ಯಾಲಿ ನಡೆಸಲು ಪೊಲೀಸರು ಅನುಮತಿ ನಿರಾಕರಿಸಿರುವ ಜೊತೆಗೆ ಟ್ರ್ಯಾಕ್ಟರ್ ಹಾಗೂ ವಾಹನಗಳು ಜಿಲ್ಲಾ ಗಡಿ ದಾಟದಂತೆ ಕ್ರಮ ಕೈಗೊಳ್ಳಬೇಕೆಂದು ರಾಜ್ಯ ಪೊಲೀಸ್ ಮಹಾನಿರ್ದೇಶಕರು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ. ಇದರ ಬೆನ್ನಲ್ಲೇ ಬೆಂಗಳೂರು ಪ್ರವೇಶಿಸುವ ಗಡಿ ಭಾಗಗಳಲ್ಲಿ ಟ್ರ್ಯಾಕ್ಟರ್‌ಗಳನ್ನು ತಡೆಗಟ್ಟಲು ಬೆಂಗಳೂರು ಗ್ರಾಮಾಂತರ ಪೊಲೀಸರು ಸಜ್ಜಾಗಿದ್ದಾರೆ.

ಸರ್ಕಾರದ ಈ ನಡೆಗೆ ತೀವ್ರ ವಿರೋಧ ವ್ಯಕ್ತಪಡಿಸಿರುವ ವಿವಿಧ ಸಂಘಟನೆಗಳ ಮುಖಂಡರು, ಪೊಲೀಸರು ರೈತರ ಹೋರಾಟ ನಿರ್ಬಂಧಿಸಲು ಮುಂದಾದರೆ ಪರಿಸ್ಥಿತಿ ಕೈ ಮೀರುತ್ತದೆ.

» 13



## ದಿಲ್ಲಿಯಲ್ಲಿ ಇಂದು ಟ್ರ್ಯಾಕ್ಟರ್ ಪರೇಡ್!

**60 ದಿನ:** 3 ಕೃಷಿ ಕಾಯ್ದೆ ರದ್ದತಿಗೆ ಆಗ್ರಹಿಸಿ ದಿಲ್ಲಿಯಲ್ಲಿ ರೈತರ ದೀರ್ಘ ಹೋರಾಟ

**2 ಲಕ್ಷ:** ದಿಲ್ಲಿಯಲ್ಲಿಂದು ಮೆರವಣಿಗೆ ನಡೆಸಲಿರುವ ಟ್ರ್ಯಾಕ್ಟರ್‌ಗಳ ಅಂದಾಜು ಸಂಖ್ಯೆ

**3 ಮಾರ್ಗ:** ದಿಲ್ಲಿಯಲ್ಲಿ ಟ್ರ್ಯಾಕ್ಟರ್ ಪರೇಡ್‌ಗೆ ಅನುಮತಿ ನೀಡಲಾಗಿರುವ ರಸ್ತೆಗಳು

**100 ಕಿಮೀ:** ನಿರ್ದಿಷ್ಟ ಮಾರ್ಗದಲ್ಲಿ ಮೆರವಣಿಗೆ ತೆರಳಿ ಮತ್ತೆ ದಿಲ್ಲಿ ಗಡಿಗೆ ವಾಪಸ್

**2500 ಜನ:** ಶಿಸ್ತುಬದ್ಧ ಪರೇಡ್ ನಡೆಸಲು ಸ್ವಯಂಸೇವಕರನ್ನು ನೇಮಿಸಿದ ರೈತರು

### ಟ್ರ್ಯಾಕ್ಟರ್‌ಗಳಿಗೆ ರಾಷ್ಟ್ರಧ್ವಜ



ಗಣರಾಜ್ಯೋತ್ಸವವನ್ನು ಜನರ ಗಣರಾಜ್ಯೋತ್ಸವವನ್ನಾಗಿ ಆಚರಿಸುತ್ತೇವೆ. ನಮ್ಮ ಎಲ್ಲ ವಾಹನಗಳಿಗೆ ರಾಷ್ಟ್ರಧ್ವಜ, ಹಸಿರು ಬಾವುಟ ಕಟ್ಟಿ ಬೆಂಗಳೂರಿನ ಹೊರವಲಯದ ನೈಸ್ ಜಂಕ್ಷನ್‌ನಿಂದ ಸ್ವಾತಂತ್ರ್ಯ ಉದ್ಯಾನಕ್ಕೆ ಮೆರವಣಿಗೆ ನಡೆಸುತ್ತೇವೆ. ರಾಜ್ಯಪಾಲರಿಂದ ಧ್ವಜಾರೋಹಣ ಬಳಿಕ ನಮ್ಮ ಪರೇಡ್ ಶುರುವಾಗಲಿದೆ.

• ಕೋಡಿಹಳ್ಳಿ ಚಂದ್ರಶೇಖರ್

### ಕೆಲವರಿಂದ ರೈತರ ದುರ್ಬಳಕೆ



ರೈತರ ಹೋರಾಟವನ್ನು ಜೆಡಿಎಸ್ ಬೆಂಬಲಿಸುತ್ತದೆ. ಆದರೆ, ಕೆಲವರು ರಾಜಕೀಯ ಲಾಭಕ್ಕೆ ರೈತರನ್ನು ದುರ್ಬಳಕೆ ಮಾಡುತ್ತಿದ್ದಾರೆ.

• ಕುಮಾರಸ್ವಾಮಿ

### ಜೈಲ್ ಭರೋ ಮಾಡ್ತೀವಿ



ರೈತರ ರೈತರ ಟ್ರ್ಯಾಕ್ಟರ್ ಜಪ್ತಿ ಮಾಡಿದರೆ ಅದನ್ನು ನಾವೇ ಬಿಡಿಸಿಕೊಡ್ತೀವಿ. ಕೇಸ್ ಹಾಕಿದರೆ, ಜೈಲ್ ಭರೋ ಚಳವಳಿ ಮಾಡ್ತೀವಿ.

• ಡಿ.ಕೆ.ಶಿವಕುಮಾರ್

**ರೈತ ಕಹಳೆ** ರ‍್ಯಾಲಿಯಲ್ಲಿ ರಾಜ್ಯದ ವಿವಿಧ ಜಿಲ್ಲೆಗಳಿಂದ 20 ಸಾವಿರ ರೈತರು ಭಾಗಿ | ಪೊಲೀಸರ ಅನುಮತಿ ಬೇಕಿಲ್ಲ: ಕುರುಬೂರು ಶಾಂತಕುಮಾರ್

# ಇಂದು ಕರ್ನಾಟಕದಲ್ಲಿ ರೈತರ ಕ್ರಾಂತಿ!

◄ ಮೊದಲ ಪುಟದಿಂದ

ಒಂದು ವೇಳೆ ಕಾನೂನು ಮತ್ತು ಸುವ್ಯವಸ್ಥೆ ಹದಗೆಟ್ಟರೆ ಅದಕ್ಕೆ ರಾಜ್ಯ ಸರ್ಕಾರವೇ ಜವಾಬ್ದಾರಿಯಾಗಲಿದೆ. ಟ್ರ್ಯಾಕ್ಟರ್ ತರಲು ಅವಕಾಶ ನೀಡದಿದ್ದರೆ ರಾಜ್ಯ, ರಾಷ್ಟ್ರೀಯ ಹೆದ್ದಾರಿಗಳನ್ನು ಬಂದ್ ಮಾಡಲು ಯೋಚಿಸಲಾಗುವುದು ಎಂದು ಎಚ್ಚರಿಸಿದ್ದಾರೆ.

ಸೋಮವಾರ ಪ್ರತ್ಯೇಕವಾಗಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ವಿವಿಧ ಸಂಘಟನೆಗಳನ್ನು ಒಳಗೊಂಡ 'ಸಂಯುಕ್ತ ಹೋರಾಟ ಕರ್ನಾಟಕ ಸಮಿತಿ' ಸಂಚಾಲಕ ಚಾಮರಸ ಮಾಲಿ ಪಾಟೀಲ್ ಹಾಗೂ ರಾಜ್ಯ ಕಬ್ಬು ಬೆಳೆಗಾರರ ಸಂಘದ ಅಧ್ಯಕ್ಷ ಕುರುಬೂರು ಶಾಂತಕುಮಾರ್ ಅವರು, ಶಾಂತಿಯುತವಾಗಿ ಟ್ರ್ಯಾಕ್ಟರ್ ಪರೇಡ್ ಮಾಡಲಾಗುವುದು. ಗಣರಾಜ್ಯೋತ್ಸವ ಆಚರಣೆಗೆ ಯಾವುದೇ ರೀತಿ ಧಕ್ಕೆ ಆಗದಂತೆ ರ‍್ಯಾಲಿ ನಡೆಸಲಾಗುವುದು. ರ‍್ಯಾಲಿ ನಡೆಸಿ ಮಧ್ಯಾಹ್ನದ ಹೊತ್ತಿಗೆ ಸ್ವಾತಂತ್ರ್ಯ ಉದ್ಯಾನದಲ್ಲಿ ಬೃಹತ್ ರೈತ ಸಮಾವೇಶ ನಡೆಸಲಾಗುವುದು ಎಂದರು.

**20 ಸಾವಿರ ರೈತರು ಭಾಗಿ:** ಚಾಮರಸ ಮಾಲಿ ಪಾಟೀಲ್ ಮಾತನಾಡಿ, ರಾಜ್ಯದ ವಿವಿಧ ಭಾಗಗಳಿಂದ ಸಾವಿರಾರು ಟ್ರ್ಯಾಕ್ಟರ್ ಹಾಗೂ ವಾಹನಗಳಲ್ಲಿ ಸುಮಾರು 20 ಸಾವಿರ ರೈತರು ಈ ಹೋರಾಟದಲ್ಲಿ ಪಾಲ್ಗೊಳ್ಳುವ ನಿರೀಕ್ಷೆಯಿದೆ. ಮುಂಬೈ ಕರ್ನಾಟಕ ಮತ್ತು ಹೈದರಾಬಾದ್ ಕರ್ನಾಟಕದ ರೈತರು ಸೇರಿದಂತೆ ಚಾಮರಾಜನಗರ, ಮೈಸೂರು, ಕೊಡಗು, ಮಂಡ್ಯ, ರಾಮನಗರ ಹಾಗೂ ನಗರದ ಸುತ್ತಮುತ್ತಲ ಜಿಲ್ಲೆಗಳ ರೈತರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಳ್ಳಲಿದ್ದಾರೆ ಎಂದರು.

> **ದೆಹಲಿಯಲ್ಲಿ ರೈತರ ಶಾಂತಿಯುತ ಟ್ರ್ಯಾಕ್ಟರ್ ಪರೇಡ್‌ಗೆ ಅಲ್ಲಿನ ಸರ್ಕಾರ ಹಾಗೂ ಪೊಲೀಸರು ಅನುಮತಿ ನೀಡಿದ್ದಾರೆ. ನಾವು ಸಹ ಅದೇ ಮಾದರಿಯಲ್ಲಿ ಶಾಂತಿಯುತ ಹೋರಾಟಕ್ಕೆ ಅನುಮತಿ ಕೇಳಿದ್ದೇವೆ, ಹೋರಾಟಕ್ಕೆ ಅಡ್ಡಿಪಡಿಸಿದರೆ ರಸ್ತೆಗಳಲ್ಲೇ ಧರಣಿ ಕೂರಲಾಗುತ್ತದೆ**
>
> • **ಚಾಮರಸ ಮಾಲಿಪಾಟೀಲ್**, ಸಂಯುಕ್ತ ಹೋರಾಟ ಕರ್ನಾಟಕ ಸಮಿತಿ ಸಂಚಾಲಕ

ರಾಜ್ಯದ ವಿವಿಧ ಭಾಗಗಳಿಂದ ಬರುವ ರೈತರು ನಗರದ ಹೊರವಲಯವಾದ ತುಮಕೂರು ರಸ್ತೆಯ ನೈಸ್ ರೋಡ್ ಜಂಕ್ಷನ್, ಮೈಸೂರು ರಸ್ತೆಯ ಬಿಡದಿ ಇಂಡಸ್ಟ್ರಿಯಲ್ ಜಂಕ್ಷನ್, ಹೊಸಕೋಟೆ ಟೋಲ್ ಜಂಕ್ಷನ್, ಚಿಕ್ಕಬಳ್ಳಾಪುರ ರಸ್ತೆಯ ದೇವನಹಳ್ಳಿ ನಂದಿ ಕ್ರಾಸ್ ಬಳಿ ಬೆಳಗ್ಗೆ 9 ಗಂಟೆಗೆ ಜಮಾವಣೆಗೊಂಡು ಬಳಿಕ ಮಧ್ಯಾಹ್ನ 12.30ರ ಹೊತ್ತಿಗೆ ನಗರದ ಕ್ರಾಂತಿವೀರ ಸಂಗೊಳ್ಳಿ ರಾಯಣ್ಣ ರೈಲು ನಿಲ್ದಾಣ ತಲುಪಲಿದ್ದಾರೆ. ಮಧ್ಯಾಹ್ನ 2 ಗಂಟೆಗೆ ಸ್ವಾತಂತ್ರ್ಯ ಉದ್ಯಾನದಲ್ಲಿ ನಡೆಯುವ ರೈತ ಸಮಾವೇಶದಲ್ಲಿ ಸ್ವಾತಂತ್ರ್ಯ ಹೋರಾಟಗಾರ ಎಚ್.ಎಸ್.ದೊರೆಸ್ವಾಮಿ ಅವರು ಧ್ವಜಾರೋಹಣ ಮಾಡಲಿದ್ದಾರೆ. ಬಳಿಕ ರೈತ ಮುಖಂಡರು, ವಿಷಯ ತಜ್ಞರು ರೈತ ವಿರೋಧಿ ಕೃಷಿ ಕಾಯ್ದೆಗಳ ಬಗ್ಗೆ ಮಾತನಾಡಲಿದ್ದಾರೆ ಎಂದರು.

ದಲಿತ ಮುಖಂಡ ಮಾವಳ್ಳಿ ಶಂಕರ್ ಮಾತನಾಡಿ, ರೈತರ ಟ್ರ್ಯಾಕ್ಟರ್ ಪರೇಡ್ ಸಂಬಂಧ ಬೆಂಗಳೂರು ನಗರ ಪೊಲೀಸ್ ಆಯುಕ್ತರೊಂದಿಗೆ ನಡೆದ ಸಭೆಯಲ್ಲಿ ಯಾವುದೇ ಹಿಂಸೆ, ಸಾರ್ವಜನಿಕ ಆಸ್ತಿಪಾಸ್ತಿಗೆ ಹಾನಿಯುಂಟು ಮಾಡುವುದಿಲ್ಲ ಎಂದು ಮಾಹಿತಿ ನೀಡಿದ್ದರೂ ಪೊಲೀಸರು ರಾಜ್ಯದ ಹಲವೆಡೆ ಟ್ರ್ಯಾಕ್ಟರ್ ತಡೆಯುವುದು, ಟ್ರ್ಯಾಕ್ಟರ್‌ಗಳಿಗೆ ಡೀಸೆಲ್ ಹಾಕಲು ನಿರಾಕರಿಸುವ ಮೂಲಕ ಸರ್ಕಾರ ನಾಗರಿಕ ಹೋರಾಟ ದಮನಕ್ಕೆ ಮುಂದಾಗಿದೆ ಎಂದು ಕಿಡಿಕಾರಿದರು. ಮುಖಂಡರಾದ ಜಿ.ಸಿ. ಬಯ್ಯಾರೆಡ್ಡಿ, ನಿತ್ಯಾನಂದಸ್ವಾಮಿ, ವೀರಸಂಗಯ್ಯ ಮತ್ತಿತರರು ಇದ್ದರು.

**ಪೊಲೀಸರ ಅನುಮತಿ ಬೇಕಿಲ್ಲ- ಕುರುಬೂರು:** ರಾಜ್ಯ ಕಬ್ಬು ಬೆಳೆಗಾರರ ಸಂಘದ ಅಧ್ಯಕ್ಷ ಕುರುಬೂರು ಶಾಂತಕುಮಾರ್ ಮಾತನಾಡಿ, ಮಂಗಳವಾರದ ಗಣರಾಜ್ಯೋತ್ಸವ ಆಚರಣೆಗೆ ನಮ್ಮಿಂದ ಯಾವುದೇ ಧಕ್ಕೆಯಿಲ್ಲ. ನಾವೆಲ್ಲರೂ ಶಾಂತ ರೀತಿಯಿಂದ ಟ್ರ್ಯಾಕ್ಟರ್, ಬೈಕ್, ಖಾಸಗಿ ವಾಹನಗಳಲ್ಲಿ ಬಂದು ಕೇಂದ್ರ ಮತ್ತು ರಾಜ್ಯ ಸರ್ಕಾರ ಜಾರಿಗೆ ತಂದಿರುವ ರೈತ ವಿರೋಧಿ ಕಾಯ್ದೆಗಳನ್ನು ರದ್ದುಪಡಿಸುವಂತೆ ಫ್ರೀಡಂ ಪಾರ್ಕ್‌ನಲ್ಲಿ ಸೇರಲಿದ್ದೇವೆ. ದೆಹಲಿಯಲ್ಲಿ ನಡೆಯುತ್ತಿರುವ ಟ್ರ್ಯಾಕ್ಟರ್ ಪರೇಡ್ ಬೆಂಬಲಿಸಿ ನಾವು ಇಲ್ಲಿಯೂ ಟ್ರ್ಯಾಕ್ಟರ್ ಪರೇಡ್ ನಡೆಸುತ್ತಿದ್ದು ಇದಕ್ಕೆ ಪೊಲೀಸರ ಅನುಮತಿ ಬೇಕಿಲ್ಲ ಎಂದು ಹೇಳಿದರು.

ಕೃಷಿ ಸಚಿವ ಬಿ.ಸಿ.ಪಾಟೀಲ್ ಅವರಿಗೆ ಕೃಷಿಯ ಗಂಧ ಗೊತ್ತಿಲ್ಲ. ಸಿನಿಮಾ ಡೈಲಾಗ್ ಹೊಡೆದರೆ ಅದಕ್ಕೆ ನಾವು ಸೊಪ್ಪು ಹಾಕುವುದಿಲ್ಲ. ಅವರು ಸಿನಿಮಾ ಡೈಲಾಗ್ ಹೇಳಿಕೊಂಡು ಮಾಧ್ಯಮದವರ ಮುಂದೆ ನಾಟಕ ಮಾಡುತ್ತಾರೆ. ಬಿ.ಸಿ. ಪಾಟೀಲ್ ಸಿನಿಮಾ ಮಂತ್ರಿ ಎಂದು ಟೀಕಿಸಿದರು. ರೈತ ಮುಖಂಡರಾದ ತುಂಬೆನಹಳ್ಳಿ ಶಿವಕುಮಾರ್, ಜಿ.ಜಿ. ಹಳ್ಳಿ ಬಿ. ನಾರಾಯಣಸ್ವಾಮಿ, ಗೋಪಾಲ, ಭೀಮಯ್ಯ ಉಪಸ್ಥಿತರಿದ್ದರು.